## ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :1027
02. ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು)
03. ಉತ್ತರಿಸುವ ದಿನಾಂಕ : 12/03/2026
04. ಉತ್ತರಿಸುವ ಸಚಿವರು. : ಗೃಹ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಡಿಜಿಟಲ್ ಅರೆಸ್ಟ್‌ನಿಂದಾಗಿ ಅಮಾಯಕರ ಬ್ಯಾಂಕ್ ಖಾತೆಯಿಂದ ಕೋಟಿ ಕೋಟಿ ರೂಪಾಯಿ ವಂಚನೆ ಆಗುತ್ತಿದ್ದು, ನೊಂದವರು ಮಾನಸಿಕವಾಗಿ ಕುಗ್ಗುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;</td><td>ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ ಡಿಜಿಟಲ್ ಅರೆಸ್ಟ್ ಅಡಿಯಲ್ಲಿ ವರದಿಯಾಗಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ:-<br><br>
<table>
<tr><th>ವರ್ಷ</th><th>ಡಿಜಿಟಲ್ ಅರೆಸ್ಟ್ ಪ್ರಕರಣಗಳ ಸಂಖ್ಯೆ</th></tr>
<tr><td>2023</td><td>196</td></tr>
<tr><td>2024</td><td>1129</td></tr>
<tr><td>2025</td><td>345</td></tr>
<tr><td>2026(Feb)</td><td>25</td></tr>
</table>
<br>2024ನೇ ಸಾಲಿನಿಂದ ಡಿಜಿಟಲ್ ಅರೆಸ್ಟ್ ಪ್ರಕರಣಗಳು ಗಣನೀಯವಾಗಿ ಇಳಿಮುಖವಾಗಿರುತ್ತದೆ.<br><br>
ಡಿಜಿಟಲ್ ಅರೆಸ್ಟ್‌ಗೆ ಸಂಬಂಧಿಸಿದ ಹಲವಾರು ಪ್ರಕರಣಗಳು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ:-<br><br>
ರಾಜ್ಯದಲ್ಲಿ ಇಂಟರ್‌ನೆಟ್ ಮೊಬೈಲ್ ಫೋನ್ ಆನ್‌ಲೈನ್ ಮೂಲಕ ವಂಚನೆ ಗೊಳಗಾಗುತ್ತಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಅಲ್ಲದೇ ಪ್ರತಿ ದಿನ ದಾಖಲಾಗುವ ಪ್ರಕರಣಗಳನ್ನು ಶೀಘ್ರವಾಗಿ ವಿಚಾರಣೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ /177/ಪಿಓಪಿ/2024, ದಿನಾಂಕ:01/08/2025 ರಲ್ಲಿ ರಾಜ್ಯದ 45 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು (Cyber Crime Police Station) ಎಂದು ಮರುಪದನಾಮೀಕರಿಸಿ ಆದೇಶೀಸಿದೆ. ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ Information Technology Act -2000 & IPC/BNS ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗಧಿಪಡಿಸಿ ಅಧಿಸೂಚಿಸಲಾಗಿದೆ.<br><br>
➢ ರಾಜ್ಯದಲ್ಲಿ DGP ಸೈಬರ್ ಕಮಾಂಡ್ ಹುದ್ದೆ ಸೃಜಿಸಲಾಗಿದೆ. ಇವರು ಸೈಬರ್ ಕ್ರೈಂ ಪೊಲೀಸ್ ಠಾಣೆಗಳ ಕಮಾಂಡಿಂಗ್</td></tr>
</table>

| | | |
|---|---|---|
| | | ಅಧಿಕಾರಿಯಾಗಿರುತ್ತಾರೆ. ಎಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ನೇರವಾಗಿ ಇವರಿಗೆ ಕಾರ್ಯ ವರದಿ ಸಲ್ಲಿಸಿಕೊಂಡು ಕರ್ತವ್ಯ ನಿರ್ವಹಿಸುತ್ತಿರುತ್ತವೆ. ಈ ಕ್ರಮದಿಂದ ಸೈಬರ್ ಅಪರಾಧಗಳ ತನಿಖಾ ವೇಗ ಹೆಚ್ಚಲಿದೆ.[<br>➢ ಭಾರತದ ಪ್ರಥಮ ವಿಶೇಷ ಸೈಬರ್ ಪೊಲೀಸ್ ಠಾಣೆಯನ್ನು 2001ರಲ್ಲಿ ಬೆಂಗಳೂರು ನಗರದಲ್ಲಿ ಸ್ಥಾಪಿಸಲಾಯಿತು.<br>➢ ಸಿಐಡಿ ಅಡಿಯಲ್ಲಿ ಸೈಬರ್ ಕ್ರೈಂ ವಿಭಾಗವು ರಾಜ್ಯದ ಸೈಬರ್ ಅಪರಾಧ ತನಿಖೆಗೆ ಕೇಂದ್ರ ಕಛೇರಿ ಆಗಿದ್ದು, ಇತರೆ ಘಟಕಗಳೊಂದಿಗೆ ಸಮನ್ವಯ ಮಾಡುತ್ತದೆ.<br>➢ ಸೈಬರ್ ಅಪರಾಧಗಳಿಗೆ ಸಂಬಂದಿಸಿದಂತೆ ಕೇಂದ್ರ ಸರ್ಕಾರದಿಂದ ಗೃಹ ಸಚಿವಾಲಯದ ಎನ್.ಸಿ.ಆರ್.ಪಿ (National Cyber Crime Reporting Portal) ನಲ್ಲಿ ದೂರುಗಳನ್ನು ದಾಖಲಿಸಲು ಸಾರ್ವಜನಿಕರಿಗೆ ಅವಕಾಶವಿದ್ದು, ದೂರುಗಳನ್ನು ದಾಖಲಿಸಿದ ನಂತರ ಈ ಪೋರ್ಟಲ್ ಮುಖಾಂತರ ಪಡೆದುಕೊಂಡು ತನಿಖೆಯನ್ನು ಕೈಗೊಂಡಿರುತ್ತದೆ.<br>➢ ಸೈಬರ್ ಅಪರಾಧ ಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ವಾದ ನ್ಯಾಯಾಲಯವನ್ನು ಸೃಜನೆ ಮಾಡಲಾಗಿರುತ್ತದೆ.<br>➢ ಪ್ರತಿ ಸೈಬರ್ ಠಾಣೆಯಲ್ಲಿ ಸೈಬರ್ ಕ್ರೈಂ ಗೆ ಸಂಬಂಧಿಸಿದಂತೆ ಪ್ರಕರಣಗಳ ತನಿಖೆಯಯನ್ನು ಕೈಗೊಳ್ಳಲು ಪೊಲೀಸ್ ಇನ್ಸಪೆಕ್ಟರ್ ಹುದ್ದೆಯನ್ನು ಡಿವೈಎಸ್ಪಿ/ಎಸಿಪಿ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಿರುತ್ತದೆ.<br>➢ ಠಾಣಾ ಸರಹದ್ದಿನಲ್ಲಿ ಬರುವಂತಹ ಕಂಪನಿಗಳು, ಶಾಲಾ ಕಾಲೇಜುಗಳು,ಅಪಾರ್ಟ್‌ಮೆಂಟ್, ಪಾರ್ಕ ಮತ್ತು ಮುಂತಾದ ಸ್ಥಳಗಳಲ್ಲಿ ಸೈಬರ್ ಕ್ರೈಂ ಬಗ್ಗೆ ಜಾಗೃತಿ ಕಾರ್ಯ ಕ್ರಮಗಳನ್ನು ಕೈಗೊಂಡಿರುತ್ತದೆ.<br>➢ ಟಿ ವಿ ಮಾದ್ಯಮ ಮತ್ತು ಪತ್ರಿಕಾ ಮಾಧ್ಯಮಗಳಲ್ಲಿ ಡಿಜಿಟಲ್ ಅರೆಸ್ಟ ಬಗ್ಗೆ ಜಾಹಿರಾತು ನೀಡಲಾಗಿರುತ್ತದೆ.<br>➢ ಡಿಜಿಟಲ್ ಅರೆಸ್ಟ ಮತ್ತು ಸೈಬರ್ ಅಪರಾಧ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ಪತ್ತೆಹಚ್ಚುವ ಸಂಬಂಧ ಸೈಬರ್ ಕಮಾಂಡರ್ ಯುನಿಟ್ ರಚನೆಯಾಗಿರುತ್ತದೆ.<br>➢ ಬ್ಯಾಂಕ್‌ಗಳ ನೋಡಲ್ ಅಧಿಕಾರಿಗಳಿಗೆ ಮಾಸಿಕ ಸಭೆಗಳನ್ನು ತೆಗದುಕೊಂಡು ಸೈಬರ್ ಪ್ರಕರಣಗಳಲ್ಲಿ ಭಾಗಿಯಾಗುವ ಖಾತೆಗಳ ಮೇಲೆ ನಿಗಾವಹಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.<br>➢ ಸಿಸಿಯು ಘಟಕದಿಂದ ಸಾಮಾಜಿಕ ಜಾಲತಾಣಗಳಾದ ಫೇಸ್ ಬುಕ್, ವಾಟ್ಸಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ.<br>➢ ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ ಹಾಗೂ ಇತರ |

| | | |
|---|---|---|
| | | ವಂಚನೆಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ **ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧ ಪ್ರಕರಣಗಳಲ್ಲಿ** ಆರೋಪಿಗಳ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಲು ಐಟಿ ಕಾಯ್ದೆ ಹಾಗೂ BNSನ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br>➢ ಸೈಬರ್ ಅಪರಾಧ ಸಹಾಯವಾಣಿಗಳಿಗೆ "ಗೋಲ್ಡನ್ ಅವರ್" ನಲ್ಲಿ ಬರುವ ದೂರುಗಳನ್ನು ಸ್ವೀಕರಿಸಲು ಕರ್ನಾಟಕ ಪೊಲೀಸ್ ಇಲಾಖೆ 1930 ಹೆಲ್ಪ್‌ಲೈನ್ ಅನ್ನು ವೆಬ್‌ಬಾಟ್ ಸೌಲಭ್ಯದಿಂದ ಉನ್ನತೀಕರಿಸಿದೆ. ಇದರಿಂದ SMS ಮುಖಾಂತರ ಸ್ವಯಂ ಮಾಹಿತಿ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. ದೂರುಗಳನ್ನು "ಹಣಕಾಸು ಮತ್ತು ಹಣಕಾಸೇತರ" ಎಂದು ವಿಂಗಡಿಸುವ IVR ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಹೆಚ್ಚು ಕರೆಗಳು ಬಂದಾಗ ಆಟೋಮೇಟೆಡ್ ಕರೆ ವ್ಯವಸ್ಥೆ ಮೂಲಕ ಧ್ವನಿ ಮಾರ್ಗದರ್ಶನ ಸೌಲಭ್ಯವಿರುತ್ತದೆ. ದೂರುದಾರರು ತಮ್ಮ ದೂರಿನ ಸ್ಥಿತಿ ಹಂತವನ್ನು ತಿಳಿದುಕೊಳ್ಳಬಹುದಾಗಿರುತ್ತದೆ. 24/7 ಕಾಲ್ ಸೆಂಟರ್ ಕರ್ತವ್ಯ ನಿರ್ವಹಿಸುತ್ತಿರುತ್ತದೆ.<br>➢ ರಾಜ್ಯದಲ್ಲಿ **"ಮನೆ-ಮನೆಗೆ ಪೊಲೀಸ್"** ಎಂಬ ನೂತನ ಪರಿಕಲ್ಪನೆಯನ್ನು ಜಾರಿಗೊಳಿಸುವ ಮೂಲಕ ಪ್ರತಿ ಮನೆ-ಮನೆಗೆ ಪೊಲೀಸ್ ಭೇಟಿ ನೀಡುವ ಮೂಲಕ ಸಮುದಾಯ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲಾಗಿದೆ.<br>➢ ಸ್ಥಾಯಿ ಆದೇಶ ಸಂಖ್ಯೆ:1053 ರಲ್ಲಿ ಏಕಾಂಗಿಯಾಗಿ ವಾಸಿಸುವ ಹಿರಿಯ ನಾಗರೀಕರಿಗೆ ಸುರಕ್ಷೆ ಮತ್ತು ವಿಶ್ವಾಸ ನೀಡುವ ಆಶಾಕಿರಣವಾಗಿ **"ಆಸರೆ"** ಎಂಬ ಸಮುದಾಯ ಪೊಲೀಸ್ ಪರಿಕಲ್ಪನೆಯನ್ನು ಅನುಷ್ಠಾನಗೊಳಿಸಲಾಗಿದೆ.<br>➢ ಸಂತ್ರಸ್ತರ ದೂರು/ಅವಹಾಲುಗಳು , ಹೇಳಿಕೆಗಳು ಜೀವಬೇದರಿಕೆ ಇದ್ದರೆ ಅಗತ್ಯ ರಕ್ಷಣೆ ಜಾಮೀನು ಅರ್ಜಿಗಳು ಇದ್ದರೆ ಪರಿಶೀಲನೆ ಮುಂತಾದ ಸಮಸ್ಯೆಗಳನ್ನು ಆಲಿಸಲು **ಪ್ರತಿ ತಿಂಗಳ 3ನೇ ಭಾನುವಾರವನ್ನು ಸಂತ್ರಸ್ತರ/ದೂರುದಾರರ (Victim Day)** ನೊಂದವರ ದಿನವೆಂಬ ಕಾರ್ಯಕ್ರಮವನ್ನು ಠಾಣಾ ವ್ಯಾಪ್ತಿಯಲ್ಲಿ ಆಯೋಜಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಈ ಸಂಬಂಧ ಎಷ್ಟು ಪ್ರಕರಣಗಳು ದಾಖಲಾಗಿವೆ; ಇದರಿಂದ ಸಾರ್ವಜನಿಕರು ಕಳೆದುಕೊಂಡ ಹಣದ ಮೊತ್ತ ಎಷ್ಟು; ಇದುವರೆಗೆ ಎಷ್ಟು ಪ್ರಕರಣಗಳಲ್ಲಿ ಎಷ್ಟು ಹಣವನ್ನು ವಶಪಡಿಸಿಕೊಳ್ಳಲಾಗಿದೆ; | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾಗಿರುವ ಡಿಜಿಟಲ್ ಅರೆಸ್ಟ್ ಪ್ರಕರಣಗಳ ಸಂಖ್ಯೆ, ವಂಚನೆಯ ಮೊತ್ತ ವಶಪಡಿಸಿಕೊಳ್ಳಲಾದ ಮೊತ್ತ ಮತ್ತು ವಶಪಡಿಸಿಕೊಳ್ಳಲಾದ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ; |

| ವರ್ಷ | ಡಿಜಿಟಲ್ ಅರೆಸ್ಟ್ ಪ್ರಕರಣಗಳ ಸಂಖ್ಯೆ | ವಂಚನೆಯ ಮೊತ್ತ ರೂ.ಗಳಲ್ಲಿ | ವಶಪಡಿಸಿಕೊಳ್ಳಲಾದ ಮೊತ್ತ ರೂ.ಗಳಲ್ಲಿ |
|---|---|---|---|
| 2023 | 196 | 22,52,38,078 | 2,32,43,742 |
| 2024 | 1129 | 219,42,53,299 | 27,82,27,716 |
| 2025 | 345 | 215,14,04,655 | 10,66,67,394 |
| **2026 (Feb)** | 25 | 11,57,85,710 | 25,18,735 |

ಇ) ಡಿಜಿಟಲ್ ಅರೆಸ್ಟ್ ವಂಚನೆಯನ್ನು ತಡೆಯುವ ಸಲುವಾಗಿ ಜಾಗೃತಿ ಮೂಡಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು.?

**"ಡಿಜಿಟಲ್ ಅರೆಸ್ಟ್" ವಂಚನೆಯನ್ನು ತಡೆಯುವ ಸಲುವಾಗಿ ಜನರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.**

- ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಕರ್ನಾಟಕ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಸಿ.ಸಿ.ಪಿ.ಎಸ್ ಪೊಲೀಸ್ ಠಾಣೆಗಳನ್ನು ಅತಿ ನಿಕಟವಾಗಿ ಮೇಲ್ವಿಚಾರಣೆ ಮಾಡಲು ಪ್ರತ್ಯೇಕ ಪೊಲೀಸ್ ಮಹಾನಿರ್ದೇಶಕರು, ಸೈಬರ್ ಕಮಾಂಡ್ ಮತ್ತು ಪೊಲೀಸ್ ಉಪ ಮಹಾನಿರೀಕ್ಷಕರು, ಸೈಬರ್ ಕಮಾಂಡ್, ಹುದ್ದೆಯನ್ನು ಸೃಜನೆ ಮಾಡಿ, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸಲು ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.
- ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಸಿ.ಪಿ.ಎಸ್ ಪೊಲೀಸ್ ಠಾಣೆ) ತೆರೆಯಲಾಗಿರುತ್ತದೆ. ಅಲ್ಲದೆ ಪ್ರತಿ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.
- ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cyber crime Investigation & Digital Forensic Training & Research" ಘಟಕವನ್ನು ಪ್ರಾರಂಭಿಸಲಾಗಿದ್ದು, Data Security Council of India ರವರ ಸಹಯೋಗದೊಂದಿಗೆ ವಿಶೇಷ ಸೈಬರ್ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗುತ್ತಿದೆ.
- ಡಿಜಿಟಲ್ ಅರೆಸ್ಟ್ ಕುರಿತಂತೆ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಡಿಜಿಟಲ್ ಅರೆಸ್ಟ್ ಕುರಿತಂತೆ ರಾಜ್ಯದ ಎಲ್ಲಾ ಟೆಲಿಕಾಮ್ ಸೇವಾದಾರರನ್ನು (TSP) ಸಂಪರ್ಕಿಸಿ ಅವರ ಗ್ರಾಹಕರಿಗೆ ಬ್ಯಾಂಕಿಂಗ್

| | | |
|---|---|---|
| | | ಡಿಟೇಲ್ಸ್ ಮತ್ತು ಪಾಸ್‌ವರ್ಡನ್ನು ಯಾರಿಗೂ ನೀಡಬಾರದೆಂದು ಸಮೂಹ ಸಂದೇಶಗಳನ್ನು (Group Messages) ರವಾನಿಸುವ ಮೂಲಕ ಸಾರ್ವಜನಿಕ ಗ್ರಾಹಕರಿಗೆ ಜಾಗೃತಿ ಮೂಡಿಸಲಾಗಿರುತ್ತದೆ.<br>➢ ಸಿಐಡಿಯ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ ಕಳೆದ ಹಲವು ವರ್ಷಗಳಿಂದ ಮಿಲಿಟರಿ, ಬ್ಯಾಂಕಿಂಗ್ ಸೆಕ್ಟರ್, ಸರ್ಕಾರಿ ಸಂಸ್ಥೆಗಳು, ನ್ಯಾಯಾಂಗದ ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಕ್ರೈಂ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ, ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.<br>➢ ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸುವ ಸಲುವಾಗಿ ಮುದ್ರಣ ಮಾಧ್ಯಮಗಳ (Print Media) ಮೂಲಕ ವರದಿಗಳನ್ನು ಪ್ರಕಟಿಸುವುದರ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ. ಸೈಬರ್ ಜಾಗೃತಿ ಸಪ್ತಾಹವನ್ನು ಆಚರಿಸುವ ಮೂಲಕ ಕರಪತ್ರಗಳನ್ನು ಮುದ್ರಿಸಿ ಶಾಲಾ ಕಾಲೇಜ್‌ಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಅರಿವನ್ನು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ಆರ್ಥಿಕ ಸ್ವರೂಪದ ಸೈಬರ್ ಅಪರಾಧವನ್ನು ತಡೆಗಟ್ಟಲು ಉಚಿತ ಸಹಾಯವಾಣಿ (ಟೋಲ್ ಫ್ರೀ) ಸಂ: 1930 ಕರೆ ಮಾಡಿ ದೂರು ದಾಖಲಿಸುವ ಹಾಗೂ ವಂಚನೆಗೆ ಬಳಕೆಯಾಗುವ ಬ್ಯಾಂಕ್ ಖಾತೆಗಳನ್ನು ತನಿಖೆಯ ಸಲುವಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಯೋಜನೆಯನ್ನು ಜಾರಿಗೆ ತರಲಾಗಿದೆ.<br>➢ ಬ್ಯಾಂಕ್‌ಗಳ ನೋಡಲ್ ಅಧಿಕಾರಿಗಳಿಗೆ ಮಾಸಿಕ ಸಭೆಗಳನ್ನು ತೆಗದುಕೊಂಡು ಸೈಬರ್ ಪ್ರಕರಣಗಳಲ್ಲಿ ಭಾಗಿಯಾಗುವ ಖಾತೆಗಳ ಮೇಲೆ ನಿಗಾವಹಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.<br>➢ ಡಿಜಿಟಲ್ ಅರೆಸ್ಟ್ ಮತ್ತು ಸೈಬರ್ ಅಪರಾಧ ನಿಯಂತ್ರಣ ಮತ್ತು ಜಾಗೃತಿ ಕುರಿತು kspwebset &ksp app ನಲ್ಲಿ ವಿವಿಧ ರೀತಿಯ ಸೈಬರ್ ಅಪರಾಧಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಮಾಹಿತಿ ನೀಡಲಾಗುತ್ತಿರುತ್ತದೆ. |

**ಸಂಖ್ಯೆ: ಹೆಚ್‌ಡಿ 25 ಪಿಸಿಕ್ಯೂ 2026**

( **ಡಾ: ಜಿ.ಪರಮೇಶ್ವರ** )
ಗೃಹ ಸಚಿವರು